ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 67(142)

ಮಾನ್ಯ ಸದಸ್ಯರ ಹೆಸರು : ಶ್ರೀ ಚಿದಾನಂದ್ ಎಂ. ಗೌಡ(ಪದವೀಧರರ ಕ್ಷೇತ್ರ)

ಉತ್ತರಿಸುವ ದಿನಾಂಕ : 01.02.2021

ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ (ಪ್ರಾಥಮಿಕ, ಪ್ರೌಢ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ)ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; | **ಪ್ರಾಥಮಿಕ(ಅನುದಾನಿತ)**<br>ಸರ್ಕಾರದ ಸುತ್ತೋಲೆ ಸಂಖ್ಯೆ:ಇಡಿ 267 ಪಿಎಂಸಿ 2007, ದಿನಾಂಕ:12.10.2007ರಲ್ಲಿರುವಂತೆ ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ ಹೆಚ್ಚುವರಿ ಶಿಕ್ಷಕರು ಇರುವುದರಿಂದ ಅವುಗಳಲ್ಲಿನ ಅನುದಾನಿತ ಹುದ್ದೆಗಳು ಖಾಲಿಯಾದಲ್ಲಿ ಅಥವಾ ಒಂದು ಖಾಸಗಿ ಪ್ರಾಥಮಿಕ ಶಾಲೆಯನ್ನು ಸಹಾಯಾನುದಾನಕ್ಕೆ ಒಳಪಡಿಸಿದ ಪ್ರಥಮ ಸಂದರ್ಭದಲ್ಲಿ ಕೆಲವು ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗಳನ್ನು ಸಹಾಯಾನುದಾನಕ್ಕೆ ಒಳಪಡಿಸದೇ ಉಳಿದಿದ್ದಲ್ಲಿ ಅಂತಹ ಖಾಲಿ ಹುದ್ದೆಗಳನ್ನು ಹೆಚ್ಚುವರಿ ಶಿಕ್ಷಕರುಗಳಿಂದ ತುಂಬಿಕೊಳ್ಳಬೇಕೆ ಹೊರತು ನೇರ ನೇಮಕಾತಿ ಮಾಡಿಕೊಳ್ಳತಕ್ಕದ್ದಲ್ಲ ಎಂದಿರುತ್ತದೆ.<br>**ಪ್ರೌಢ ಶಿಕ್ಷಣ(ಅನುದಾನಿತ)**<br>ದಿನಾಂಕ:01.01.2016 ರಿಂದ 31.12.2019 ರವರೆಗೆ ಖಾಲಿ ಇರುವ ಬೋಧಕ ಹುದ್ದೆಗಳ ಸಂಖ್ಯೆ-3562 ಹುದ್ದೆಗಳು.<br>**ಪದವಿಪೂರ್ವ(ಅನುದಾನಿತ):**<br>ಒಟ್ಟು 908 ಉಪನ್ಯಾಸಕರ ಹುದ್ದೆಗಳು ಖಾಲಿ ಇರುತ್ತವೆ. |
| ಆ | ಹಲವಾರು ವರ್ಷಗಳಿಂದಲೂ ನಿವೃತ್ತಿ, ಅಕಾಲಿಕ ಮರಣದಿಂದಾಗಿ ಖಾಲಿ ಇರುವ ಹುದ್ದೆಗಳನ್ನು ತುಂಬಿಕೊಳ್ಳಲು ಸರ್ಕಾರ ಅನುಮತಿ ನೀಡದೆ ಇರುವುದರಿಂದ ಶೈಕ್ಷಣಿಕ ಚಟುವಟಿಕೆಗಳು ಕುಂಟಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಇ | ಈ ಸಮಸ್ಯೆಯ ಪರಿಹಾರಕ್ಕೆ ಸರ್ಕಾರ ಯಾವುದಾದರೂ ತಾತ್ಕಾಲಿಕ ಅಥವಾ ಶಾಶ್ವತ ಪರಿಹಾರಗಳನ್ನು ಕೈಗೊಂಡಿದೆಯೇ ? (ಮಾಹಿತಿ ನೀಡುವುದು) | • ಸರ್ಕಾರದ ಆದೇಶ ಸಂಖ್ಯೆ:ಇಡಿ 14 ಎಸ್‌ಇಪಿ 2017 ದಿನಾಂಕ:25.09.2018ರಲ್ಲಿ ದಿನಾಂಕ:31.12.2015ರವರೆಗೆ ಖಾಲಿ ಇರುವ 882ಬೋಧಕ ಸಿಬ್ಬಂದಿಯನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ. |
| | | • ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ದಿನಾಂಕ:31.12.2015ರ ವರೆಗೆ ವಿವಿಧ ಕಾರಣಗಳಿಂದ ಖಾಲಿಯಾದ ಮತ್ತು ನಿಗದಿತ 20 ಗಂಟೆಗಳ ಕಾರ್ಯಭಾರವನ್ನು ಹೊಂದಿರುವ ಉಪನ್ಯಾಸಕರ |

| | | |
|---|---|---|
| | | ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಆದೇಶ ಸಂಖ್ಯೆ: ಇಡಿ 144 ಟಿಪಿಯು 2016, ದಿನಾಂಕ: 09.02.2017 ಮತ್ತು ದಿನಾಂಕ: 12.09.2017 ರಲ್ಲಿ ಕೆಲವು ಷರತ್ತುಗಳೊಂದಿಗೆ ದಿನಾಂಕ:31.12.2015ರವರೆಗೆ ಖಾಲಿಯಾದ ಒಟ್ಟು 328 ವಿವಿಧ ವಿಷಯಗಳ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ.<br>• ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ಹೆಚ್ಚುವರಿ ಶಿಕ್ಷಕರನ್ನು ಮರುಹೊಂದಾಣಿಕೆ ಮಾಡಲಾಗುತ್ತಿದೆ.<br>• ಸರ್ಕಾರದ ಸುತ್ತೋಲೆ ಸಂ: ಆಇ05 ಜಿ ಇ ಎಂ 2020, ದಿ: 12/01/2021ರಲ್ಲಿ ಅನುಕಂಪ ಆಧಾರದ ಪ್ರಸ್ತಾವನೆಗಳನ್ನು ನಿಯಮಾನುಸಾರ ಪರಿಶೀಲಿಸಿ, ನೇಮಕಾತಿ ಆದೇಶ ನೀಡಲು ಸುತ್ತೋಲೆ ಸಂ: ಆಇ 03 ಜಿಇಎಂ 2020,ದಿ:06/07/2020ರಿಂದ ಕೆಲವು ಷರತ್ತುಗಳೊಂದಿಗೆ ವಿನಾಯಿತಿ ನೀಡಲಾಗಿದೆ.<br>• ಖಾಸಗಿ ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳನ್ನು ನಡೆಸುತ್ತಿರುವ ಶಿಕ್ಷಣ ಸಂಸ್ಥೆಗಳು ದಿನಾಂಕ : 01/01/2016ರ ನಂತರ ಖಾಲಿಯಾಗಿರುವ ಬೋಧಕ ಮತ್ತು ದೈಹಿಕ ಶಿಕ್ಷಕ ವೃಂದದ ಹುದ್ದೆಗಳನ್ನು ಆಡಳಿತ ಮಂಡಳಿಯ ಆಂತರಿಕ ಸಂಪನ್ಮೂಲ ಬಳಸಿಕೊಂಡು, ಅನುದಾನ ರಹಿತವಾಗಿ ಸೇವೆ ಪಡೆಯುವುದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟಕ್ಕೆ ಯಾವುದೇ ಅಡ್ಡಿ ಉಂಟಾಗಿರುವುದಿಲ್ಲ. |

ಸಂ: ಇಪಿ 43 ಎಸ್ಇಎಸ್ 2021

(ಎಸ್ .ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು